ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**ಸಿ.ಸಿ. ಸಂಖ್ಯೆ: 46/2026**

ಪ್ರ.ವ.ಬೋ.ತಾಃ 30-07-2026

ಚಾಸಾಃ 1 ಫಿರ್ಯಾಸಾಃ 1

| | |
|---|---|
| ಸಾಕ್ಷಿಯ ಹೆಸರು | ದೊಡ್ಡಕ್ಕ |
| ತಂದೆ/ಗಂಡನ ಹೆಸರು | ಈರಣ್ಣ |
| ವಯಸ್ಸು | 45 ವರ್ಷ |
| ವೃತ್ತಿ | ವ್ಯವಸಾಯ |
| ವಾಸ | ಬಸವನಹಳ್ಳಿ ಗೊಲ್ಲರಹಟ್ಟಿ, ಮಧುಗಿರಿ ತಾ. |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-**

ಆರೋಪಿ ನನ್ನ ಮಗ. ಚಾಸಾ.2 ನನ್ನ ಗಂಡ. ಆರೋಪಿ ಎಂದೂ ಸಹ ನನಗಾಗಲೀ ಅಥವಾ ಚಾಸಾ.2 ರವರಿಗಾಗಲೀ ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಕೈಗಳಿಂದ ತಳ್ಳಾಡಿ ನನ್ನ ಎದೆಗೆ ಮತ್ತು ಚಾಸಾ.2 ರವರ ತಲೆಗೆ ಹಲ್ಲೆ ಮಾಡಿ ನೋವುಂಟುಪಡಿಸಿರುವುದಿಲ್ಲ. ಚಾಸಾ.2 ರವರ ಬಲಗೈಗೆ ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿರುವುದಿಲ್ಲ ಹಾಗೂ ಜೀವ ಬೆದರಿಕೆ ಹಾಕಿರುವುದಿಲ್ಲ. ಈ ಸಂಬಂಧವಾಗಿ ನಾನಗಲೀ ಅಥವಾ ಚಾಸಾ.2 ರವರಾಗಲೀ ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವುದಿಲ್ಲ. ಈಗ ತೋರುತ್ತಿರುವ ದೂರಿನಲ್ಲಿರುವ ಸಹಿ ನನ್ನದಾಗಿರುತ್ತದೆ. ಆ ದೂರನ್ನು ನಿಪಿ.1 ಎಂದು, ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ಈಗ ತೋರುತ್ತಿರುವ ಸ್ಥಳ ಪಂಚನಾಮೆಯಲ್ಲಿರುವ ಸಹಿ ನನ್ನದಾಗಿರುತ್ತದೆ. ಅದನ್ನು ನಿಪಿ.2 ಎಂದು, ಸಾಕ್ಷಿಯ ಸಹಿಯನ್ನು

ನಿಪಿ.2(ಎ) ಎಂದು ಗುರುತಿಸಲಾಯಿತು. ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ಆ ಸಮಯದಲ್ಲಿ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನ್ಯಾಯಾಲಯದ ಮುಂದಿರುವ ದೊಣ್ಣೆಯನ್ನು ಯಾವ ಉದ್ದೇಶಕ್ಕಾಗಿ ಅಮಾನತ್ತುಪಡಿಸಿಕೊಂಡರು ಎಂಬುದು ನನಗೆ ಗೊತ್ತಿಲ್ಲ. ಈಗ ತೋರುತ್ತಿರುವ ಫೋಟೋದಲ್ಲಿರುವ ವ್ಯಕ್ತಿ ನಾನೇ ಆಗಿರುತ್ತೇನೆ. ಅದನ್ನು ನಿಪಿ.3 ಎಂದು ಗುರುತಿಸಲಾಯಿತು. ಆ ಫೋಟೋವನ್ನು ಯಾವ ಉದ್ದೇಶಕ್ಕಾಗಿ ತೆಗೆದರು ಎಂಬುದು ನನಗೆ ಗೊತ್ತಿಲ್ಲ. ಈ ಸಂಬಂಧವಾಗಿ ನಾನು ಪೊಲೀಸರ ಮುಂದೆ ಯಾವುದೇ ಮರು ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**<u>ಪಾಟೀ ಸವಾಲುಃ</u>– ಮಾನ್ಯ ಸ.ಸ.ಅ. ರವರಿಂದಃ–**

ದಿಃ 08.11.2025 ರಂದು ಬೆಳಗ್ಗೆ 7.30 ಗಂಟೆ ಸಮಯದಲ್ಲಿ ಆರೋಪಿ ಹೆಚ್.ಬಸವಹಳ್ಳಿ ಗ್ರಾಮದ ಸರ್ವೆ ನಂಬರ್ 46/1 ರ ಜಮೀನಿನಲ್ಲಿ ನಾನು ಮತ್ತು ಚಾಸಾ.2 ರವರು ಕಾಕಡಾ ಮೊಗ್ಗನ್ನು ಬಿಡಿಸುತ್ತಿರುವಾಗ ಆರೋಪಿ ನಮ್ಮ ಕುಟುಂಬದ ಸೈಟ್ ಗಳು ಮತ್ತು ಜಮೀನಿನ ವಿಚಾರವಾಗಿ ಜಗಳ ತೆಗೆದು, ನನ್ನ ಹಾಗೂ ಚಾಸಾ.2 ರವರನ್ನು ಅವಾಚ್ಯ ಶಬ್ದಗಳಿಂದ ಬೈದು, ಕೈಗಳಿಂದ ತಳ್ಳಿ ನೂಕಾಡಿ, ಕೆಳಗೆ ಬೀಳಿಸಿ ಇದರಿಂದ ನನ್ನ ಎದೆಗೆ ಮತ್ತು ಚಾಸಾ.2 ರವರ ತಲೆಗೆ ಸಾಮಾನ್ಯ ಸ್ವರೂಪದ ಗಾಯಗಳಾಗಿ, ಆರೋಪಿ ದೊಣ್ಣೆಯಿಂದ ಚಾಸಾ.2 ರವರ ಬಲಗೈಗೆ ಹೊಡೆದು ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿ, ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ಸಂಬಂಧವಾಗಿ ನಾನು ಮತ್ತು ಚಾಸಾ.2 ರವರು

ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದೆವು ಎಂದರೆ ಸರಿಯಲ್ಲ. ಈ ಘಟನೆಯ ಸಂಬಂಧ ನಾನು ನಿಪಿ.1 ರಂತಹ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ನಾನು ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ದಿಃ 09.11.2025 ರಂದು ಸಂಜೆ 05.00 ರಿಂದ 06.00 ಗಂಟೆ ಸಮಯದಲ್ಲಿ ಘಟನಾ ಸ್ಥಳಕ್ಕೆ ಭೇಟಿ ನೀಡಿ ನಾನು ಸ್ಥಳ ತೋರಿಸಿದ ಮೇರೆಗೆ ಚಾಸಾ.6 ಮತ್ತು ಚಾಸಾ.7 ರವರ ಸಮಕ್ಷಮ ಸ್ಥಳ ಪಂಚನಾಮೆ ಮಾಡಿ, ಆ ಸಮಯದಲ್ಲಿ ನ್ಯಾಯಾಲಯದ ಮುಂದಿರುವ ದೊಣ್ಣೆಯನ್ನು ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪೊಲೀಸರ ಮುಂದೆ ಮರು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಆ ಅಲ್ಲಗೆಳೆದ ಹೇಳಿಕೆಯನ್ನು ನಿಪಿ.4 ಎಂದು ಗುರುತಿಸಲಾಯಿತು. ನಾನು, ಚಾಸಾ.2 ಹಾಗೂ ಆರೋಪಿ ನ್ಯಾಯಾಲಯದ ಹೊರಗೆ ರಾಜೀ ಆಗಿದ್ದೇವೆ ಎಂದರೆ ಸರಿ. ಆ ಕಾರಣಕ್ಕಾಗಿ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ– ಆರೋಪಿ ಪರ ವಕೀಲರಿಂದಃ**– ಏನೂ ಇಲ್ಲ.

ಮರು ವಿಚಾರಣೆಃ– ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ